**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿ.ಸಿ. ಸಂಖ್ಯೆ :62/2022**

**ಚಾ.ಸಾಃ 01, ಫ್ರಾ.ಸಾಃ 01**

| | |
|---|---|
| ಸಾಕ್ಷಿದಾರನ ಹೆಸರು | ರಾಫೀಯಾ ಖಾಜೀ |
| ಗಂಡನ ಹೆಸರು | ಹುಸೇನ್ ಸಾಬ್ ಖಾಜಿ |
| ವಯಸ್ಸು | 33 ವರ್ಷಗಳು |
| ಉದ್ಯೋಗ | ಗೃಹಿಣಿ |
| ವಾಸ್ತವ್ಯ | ಕಾಸರಕೋಡ, ಹೊನ್ನಾವರ |

**ಸಾಕ್ಷಿಯನ್ನು ದಿನಾಂಕಃ 14-01-2026 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಅಪರಾಧಿಕಾ ಪ್ರಕ್ರಿಯಾ ಸಂಹಿತೆ ಕಲಂ 299 ರಡಿ ದಾಖಲು ಮಾಡಿಕೊಂಡ ಸಾಕ್ಷಿ ಹೇಳಿಕೆ.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

1 ನೇ ಆರೋಪಿ ನನ್ನ ಗಂಡ. 2 ನೇ ಆರೊಪಿ ನನ್ನ ಅತ್ತೆ. 3 ರಿಂದ 5 ನೇ ಆರೋಪಿ ನನ್ನ ನಾದಿನಿ.

ನನ್ನ ಮತ್ತು ಆರೋಪಿಯ ಮದುವೆ ದಿಃ 24-07-2016 ರಂದು ಆಗಿರುತ್ತದೆ. ಮದುವೆ ಆದ ನಂತರ ನಾನು ನನ್ನ ಗಂಡನ ಮನೆಗೆ ಹೋಗಿರುತ್ತೇನೆ. ಆರೋಪಿತರು ನನಗೆ ಯಾವುದೇ ಕಿರುಕುಳ ನೀಡಿರುವುದಿಲ್ಲ. ನನ್ನ ಗಂಡ ಈಗ ಕತಾರ್ ದೇಶದಲ್ಲಿದ್ದು, ಜೀವನಾಂಶದ ವಿಚಾರವಾಗಿ ವಕೀಲರ ಬಳಿ ಹೋದಾಗ ಒಂದು ದಾಖಲೆಗೆ ಸಹಿ ತೆಗೆದುಕೊಂಡಿರುತ್ತಾರೆ. ತದನಂತರ ಪೊಲೀಸರು ಮನೆ ಹತ್ತಿರ ಬಂದು ಒಂದು ಪಂಚನಾಮೆಗೆ ಸಹಿ ತೆಗೆದುಕೊಂಡಿರುತ್ತಾರೆ. ಪಂಚನಾಮೆಯ ದೃಢೀಕೃತ ನಕಲನ್ನು ನೋಡುತ್ತಿದ್ದು, ಅದನ್ನು ನಿ.ಪಿ. 1 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ. 1(ಎ) ಎಂದು ಗುರುತಿಸಲಾಯಿತು.

ಪೊಲೀಸರ ಮುಂದೆ ನಾನು ಯಾವುದೇ ಮರುಹೇಳಿಕೆ ನೀಡಿರುವುದಿಲ್ಲ.

**(ಈ ಸಂದರ್ಭದಲ್ಲಿ ಸ.ಸ.ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀಸವಾಲಿಗೆ ಒಳಪಡಿಸಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು.)**

**ಪಾಟೀಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ,**

1 ನೇ ಆರೋಪಿಯೊಡನೆ ನನ್ನ ಮದುವೆಯಾದ ನಂತರ ನಾನು ಆರೋಪಿತರ ಮನೆಯಲ್ಲಿ ವಾಸವಾಗಿದ್ದಾಗ 1 ನೇ ಆರೋಪಿಯು ವಿದೇಶದಲ್ಲಿದ್ದು ಆರೋಪಿತರು ಮನೆಗೆ ಬಂದವರ ಜೊತೆ ನಾನು ಸಂಬಂಧ ಇಟ್ಟುಕೊಂಡಿದ್ದೇನೆ ಎಂದು 1 ನೇ ಆರೋಪಿಗೆ ಚಾಡಿ ಹೇಳಿದ್ದು ಈ ಕಾರಣಕ್ಕೆ 1 ನೇ ಆರೋಪಿ ನನಗೆ ಅವಾಚ್ಯ ಶಬ್ದಗಳಿಂದ ಬೈದಿದ್ದರು ಎಂದರೆ ಸರಿಯಲ್ಲ. 1 ನೇ ಆರೋಪಿಯು 2 ರಿಂದ 5 ನೇ

ಆರೋಪಿತರ ಮಾತು ಕೇಳಿ ನನ್ನನ್ನು ಬೆಂಕಿ ಹಚ್ಚಿ ಕೊಲ್ಲುವುದಾಗಿ ಜೀವಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ನನಗೆ ದೈಹಿಕವಾಗಿ ಮಾನಸಿಕವಾಗಿ ಹಿಂಸೆ ನೀಡಿದ್ದು 2 ರಿಂದ 5 ನೇ ಆರೋಪಿತರು ನನ್ನ ಮೇಲೆ ಹಲ್ಲೆ ಮಾಡಿ ತವರು ಮನೆಯಿಂದ 5 ಲಕ್ಷ ರೂಪಾಯಿ ವರದಕ್ಷಿಣೆ ತೆಗೆದುಕೊಂಡು ಬರುವಂತೆ ದೈಹಿಕ ಮತ್ತು ಮಾನಸಿಕ ಹಿಂಸೆ ನೀಡಿರುತ್ತಾರೆ ಎಂದರೆ ಸರಿಯಲ್ಲ. ಇದೇ ಕಾರಣಕ್ಕೆ ನಾನು ವಕೀಲರ ಮೂಲಕ ಖಾಸಗಿ ದೂರು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಮಾನ್ಯ ನ್ಯಾಯಾಲಯದ ಆದೇಶದಂತೆ ಪೋಲೀಸರು ಪ್ರಕರಣ ದಾಖಲಿಸಿ ದಿನಾಂಕ 01-10-2019 ರಂದು ಘಟನಾ ಸ್ಥಳಕ್ಕೆ ಭೇಟಿ ನೀಡಿ ನಾನು ತೋರಿಸಿದ ಸ್ಥಳದಲ್ಲಿ ಪಂಚರ ಸಮಕ್ಷಮ ನಿಪಿ-1 ರಂತೆ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಘಟನೆಗೆ ಸಂಬಂಧಪಟ್ಟಂತೆ ನಾನು ಈಗ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಹೇಳಿಕೆಯ ಭಾಗವನ್ನು ನಿಪಿ-2 ಎಂದು ಗುರುತಿಸಲಾಯಿತು. ಆರೋಪಿತರು ಮತ್ತು ನಾವು ಈಗ ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ. ಆ ಕಾರಣಕ್ಕೆ ನಾನು ಈಗ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ. **Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**